# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಮೊರಾರ್ಜಿದೇಸಾಯಿ ಪದವಿ ಪೂರ್ವ ವಸತಿ ಕಾಲೇಜು/ಅಲ್ಪಸಂಖ್ಯಾತರ ಮಾದರಿ ವಸತಿ ಶಾಲೆಗಳ (ನವೋದಯ) ಸಿಬ್ಬಂದಿಗಳ ಭರ್ತಿಗಾಗಿ ಕಾರ್ಯಕಾರಿ ಆದೇಶ ಹೊರಡಿಸುವ ಬಗ್ಗೆ.

**ಓದಲಾಗಿದೆ:** 1 ಸರ್ಕಾರಿ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 273 ಎಂಡಿಎಸ್ 2015 ದಿನಾಂಕ: 13.03.2015.

2 ಸರ್ಕಾರಿ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 295 ಎಂಡಿಎಸ್ 2015 ದಿನಾಂಕ: 21.12.2015.

3 ಸರ್ಕಾರಿ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 295 ಎಂಡಿಎಸ್ 2015 ದಿನಾಂಕ: 13.06.2015.

4 ಸರ್ಕಾರಿ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 193 ಎಂಡಿಎಸ್ 2015, ದಿನಾಂಕ: 02.01.2016.

5 ಸರ್ಕಾರಿ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 133 ಎಂಡಿಎಸ್ 2016, ದಿನಾಂಕ: 22.07.2016.

6 ಸರ್ಕಾರಿ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 154 ಎಂಡಿಎಸ್ 2010, ದಿನಾಂಕ: 15.03.2011.

7 ಸರ್ಕಾರಿ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 496 ಎಂಡಿಎಸ್ 2012, ದಿನಾಂಕ: 15.07.2014.

8 ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಬೆಂಗಳೂರು ರವರ ಪತ್ರ ಸಂಖ್ಯೆ: ಅಸಂನಿ/ಪಿಎ/ಇತರೆ/ಸಿಆರ್-01/2016-17 ದಿನಾಂಕ: 11.07.2016.

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮಸಂಖ್ಯೆ (1)ರ ಸರ್ಕಾರಿ ಆದೇಶದಲ್ಲಿ 2014-15ನೇ ಸಾಲಿನಿಂದ ಜಾರಿಗೆ ಬರುವಂತೆ ಕ್ರಮವಾಗಿ ಮಂಡ್ಯ ಜಿಲ್ಲೆಯ ಕೆ.ಆರ್ ಪೇಟೆ ತಾಲ್ಲೂಕಿನ ಸಂತೇಬಾಚಿಹಳ್ಳಿ ಹೋಬಳಿಯ ಆದಿಹಳ್ಳಿ ಗ್ರಾಮ ಮತ್ತು ಯಾದಗಿರಿ ಜಿಲ್ಲೆಯ ಯಾದಗಿರಿ ತಾಲ್ಲೂಕಿನಲ್ಲಿ ತಲಾ ಒಂದರಂತೆ ಎರಡು ಅಲ್ಪಸಂಖ್ಯಾತರ ಮಾದರಿ ವಸತಿ ಶಾಲೆ (ನವೋದಯ)ಗಳನ್ನು ಪ್ರಾರಂಭಿಸಲು ಮಂಜೂರಾತಿ ನೀಡಿ 100 ಹುದ್ದೆಗಳನ್ನು ಸೃಜಿಸಲಾಗಿದ್ದು, ಅದರಂತೆ ರಾಜ್ಯದಲ್ಲಿ ಅಲ್ಪಸಂಖ್ಯಾತರ ನಿರ್ದೇಶನಾಲಯದ ವತಿಯಿಂದ 02 ಅಲ್ಪಸಂಖ್ಯಾತರ ಮಾದರಿ ವಸತಿ ಶಾಲೆಗಳು ಕಾರ್ಯನಿರ್ವಹಿಸುತ್ತಿವೆ.

ಮೇಲೆ ಓದಲಾದ ಕ್ರಮಸಂಖ್ಯೆ (2)ರ ಸರ್ಕಾರಿ ಆದೇಶದಲ್ಲಿ 02 ಮೊರಾರ್ಜಿ ದೇಸಾಯಿ ವಸತಿ ಕಾಲೇಜುಗಳನ್ನು ಬಾಗಲಕೋಟೆ ಮತ್ತು ರಾಯಚೂರು ಜಿಲ್ಲೆಗೆ ಮಂಜೂರು ಮಾಡಿ ಉಲ್ಲೇಖ (3)ರ ಸರ್ಕಾರಿ ಆದೇಶದಲ್ಲಿ 2 ಪದವಿ ಪೂರ್ವ ಕಾಲೇಜುಗಳಿಗೆ ಒಟ್ಟು 38 ಹುದ್ದೆಗಳನ್ನು ಸೃಜಿಸಿ ಭರ್ತಿ ಮಾಡಲು ಮಂಜೂರಾತಿ ನೀಡಲಾಗಿದೆ.

.....2